ಅ.ದಾ.ನಂ. 170/2025
ಪಿ.ಡಬ್ಲೂ:1

**<u>ಸಾಕ್ಷಿಯನ್ನು ಇಂದು ದಿನಾಂಕಃ 04.03.2026 ರಂದು ಕರೆಯಿಸಿ ಪ್ರಮಾಣೀಕರಿಸಲಾಯಿತು.</u>**
**<u>ಮುಖ್ಯ ವಿಚಾರಣೆಃ ಶ್ರೀ.ಜಿ.ಆರ್., ವಕೀಲರಿಂದ ವಾದಿ ಪರವಾಗಿ</u>**

ಈ ಪ್ರಕರಣದಲ್ಲಿ ನಾನು ವಾದಿ ಇರುತ್ತೇನೆ. ಈ ದಿವಸ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ವಿಷಯಗಳು ನಿಜ ಮತ್ತು ಸತ್ಯ ಇರುತ್ತದೆ. ಸದರಿ ಪ್ರಮಾಣಪತ್ರವನ್ನು ನನ್ನ ಮುಖ್ಯವಿಚಾರಣೆಯನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸುತ್ತೇನೆ.

ನಾನು ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿ.ಪಿ-1 ಮತ್ತು 2 ಎಂದು, ಒಂದು ಹಕ್ಕು ಬದಲಾವಣೆ ವಹಿಯ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-3 ಎಂದು, ಒಂದು ಮ್ಯೂಟೇಶನ್ ರಿಜಿಸ್ಟರ್ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-4 ಎಂದು, ಗ್ರಾಮ ಪಂಚಾಯತಿ ಯರನಾಳರವರು ನೀಡಿರುವ ದೃಡಿಕರಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-5 ಎಂದು, ಕಂದಾಯ ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-6 ಎಂದು, ನನ್ನ ತಂದೆಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ-7 ಎಂದು, ಮೃತನ ಕುಟುಂಬದ ಜೀವಂತ ಸದಸ್ಯದರ ದೃಡಿಕರಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-8 ಎಂದು, ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದು ಸಮಯಾವಕಾಶ ನೀಡಲಾಯಸಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಅದೆ,

1 ನೇ **ಹೆಚ್ಚುವರಿ ಸಿವಿಲ್**
**ವ ಜೆ ಎಮ್ ಎಫ್ ಸಿ ನ್ಯಾಯಾಧೀಶರು,**
**ಬಸವನ ಬಾಗೇವಾಡಿ.**